# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2018-19ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ 04 ವಕ್ಫ್ ಸಂಸ್ಥೆಗಳ ದುರಸ್ಥಿ ಮತ್ತು ಜೀರ್ಣೋದ್ಧಾರಕ್ಕಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

****

ಓದಲಾಗಿದೆ : 1) ಸರ್ಕಾರಿ ಆದೇಶ ಸಂಖ್ಯೆ: MWD 139 CWF 77 ದಿನಾಂಕ:23-08-1979

2) ಸರ್ಕಾರಿ ಆದೇಶ ಸಂಖ್ಯೆ: MWD 52 WES 2018, ದಿನಾಂಕ:26-05-2018, ಮತ್ತು 04-08-2018

3) ಮುಖ್ಯಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಇವರ ಪತ್ರ ಸಂಖ್ಯೆ: KBW/A6-2/GTS/GEN/04/2016-17,ದಿನಾಂಕ:12-09-2018.

**ಪ್ರಸ್ತಾವನೆ:**

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ರಾಜ್ಯದಲ್ಲಿನ ವಕ್ಫ್ ಸಂಸ್ಥೆಗಳಿಗೆ Grant-in Aid Code ಅನ್ನು ಆಗಸ್ಟ್ 1979 ರಲ್ಲಿ ಜಾರಿಗೊಳಿಸಲಾಗಿದೆ.

ಮೇಲೆ (2)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ವಕ್ಫ್ ಸಂಸ್ಥೆಗಳ ಜೀರ್ಣೋದ್ಧಾರ ಹಾಗೂ ದುರಸ್ಥಿಗಾಗಿ 2018-19ನೇ ಸಾಲಿಗೆ ಲೆಕ್ಕ ಶೀರ್ಷಿಕೆ 2225-03-277-3-08(059) (ಯೋಜನೆ) ರಡಿಯಲ್ಲಿ ಸರ್ಕಾರವು ರೂ.1000.00ಲಕ್ಷಗಳ ಅನುದಾನವನ್ನು ನಿಗಧಿಪಡಿಸಿ ಮೊದಲನೇ ಹಾಗೂ ಎರಡನೇ ತ್ರೈಮಾಸಿಕ ಕಂತಿನ ಅನುದಾನ ಒಟ್ಟು ರೂ.500.00ಲಕ್ಷ ಮಂಜೂರು ಮಾಡಲಾಗಿದೆ.

ಮೇಲೆ (3) ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಿಂದ ಪ್ರಸ್ತಾವನೆಗಳನ್ನು ಪಡೆಯಲಾಗಿದ್ದು ಇವುಗಳನ್ನು ಪರಿಶೀಲಿಸಿ ದಕ್ಷಿಣ ಕನ್ನಡ ಜಿಲ್ಲೆಯ 04 ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲು ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: MWD 20 WGA 2018, ಬೆಂಗಳೂರು, ದಿನಾಂಕ:28-09-2018

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ದಕ್ಷಿಣ ಕನ್ನಡ ಜಿಲ್ಲೆಯ 04 ವಕ್ಫ್ ಸಂಸ್ಥೆಗಳಿಗೆ ಜೀರ್ಣೋದ್ಧಾರ ಹಾಗೂ ದುರಸ್ಥಿಗಾಗಿ ಒಟ್ಟು 35.00/-ಲಕ್ಷ **(ಮುವತ್ತೈದು ಲಕ್ಷ ರೂಪಾಯಿಗಳು ಮಾತ್ರ)** ಗಳ ಅನುದಾನವನ್ನು ಮಂಜೂರು ಮಾಡಿದ್ದು.

| Sl.No | Name of the Institution & Address. | Purpose | Sanctioned Amount **(Rs.In Lakhs)** |
|---|---|---|---|
| 01 | Rahmaniya Masjid & Busthanul Uloom Madarasa, Ullal, Mangalore, Dakshina Kannada | Renovation of Masjid | 10.00 |

........2

| | | | |
|---|---|---|---|
| 02 | Kotepura Juma Masjid (403) & Hayathul Islam Madrasa Committee, Kotepura, Ullal Mangalore-575020 | Renovation of Masjid | 15.00 |
| 03 | Ansarull Muslimin Association (R), Gandinagar, Sulia Tq. Dakshina Kannada District. | Renovation of Masjid | 05.00 |
| 04 | Assasul Islam Madrasa & Masjid, Eliyar Post, Amblamogaru, Mangalore-575017 | Renovation of Masjid | 05.00 |
| | **TOTAL** | | **35.00** |

**(ಮುವತ್ತೈದು ಲಕ್ಷ ರೂಪಾಯಿಗಳು ಮಾತ್ರ)**

ಆ ಸಂಸ್ಥೆಗಳ ಎದುರಿಗೆ ಸೂಚಿಸಲಾಗಿರುವ ಪ್ರತ್ಯೇಕ ಮೊತ್ತವನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ಆದೇಶಿಸಿದೆ.

<u>ಷರತ್ತುಗಳು:-</u>

1. ಅನುಬಂಧದಲ್ಲಿ ಸೂಚಿಸಿರುವ ಸಂಸ್ಥೆಗಳು ವಕ್ಫ್ ಮಂಡಳಿಯಲ್ಲಿ ನೋಂದಣಿಯಾಗಿದೆಯೇ ಎಂಬುದರ ಬಗ್ಗೆ ಪರಿಶೀಲಿಸಿ ಅನುದಾನ ಬಿಡುಗಡೆ ಮಾಡತಕ್ಕದ್ದು.
2. ಈ ವೆಚ್ಚವನ್ನು ಲೆಕ್ಕ ಶೀರ್ಷಿಕೆ "2225-03-277-3-08(059)" ವಕ್ಫ್ ಸ್ವತ್ತುಗಳ ದುರಸ್ಥಿ ಹಾಗೂ ಜೀರ್ಣೋದ್ಧಾರಕ್ಕಾಗಿ (ಯೋಜನೆ) ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನದಲ್ಲಿ ಭರಿಸತಕ್ಕದ್ದು.
3. ಮೇಲೆ ಓದಲಾದ (1)ರ ಆದೇಶದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯು Grant-in-Aid ನಲ್ಲಿರುವ ಸೂಚನೆಗಳನ್ನು ವಕ್ಫ್ ಸಂಸ್ಥೆಗಳಿಗೆ ಹಣ ಬಿಡುಗಡೆಗೊಳಿಸುವ ಮುನ್ನ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
4. ರೂ.5.00 ಲಕ್ಷಕ್ಕಿಂತ ಹೆಚ್ಚು ಅನುದಾನ ಮಂಜೂರು ಮಾಡಲಾಗಿರುವ ವಕ್ಫ್ ಸಂಸ್ಥೆಗಳಿಗೆ ಮೊದಲನೇ ಕಂತಿನ ರೂ.5.00 ಲಕ್ಷಗಳನ್ನು ಪ್ರಥಮ ಕಂತಿನಲ್ಲಿ ಬಿಡುಗಡೆ ಮಾಡಿ ಇನ್ನುಳಿದ ಮೊತ್ತವನ್ನು ಎರಡನೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು. ಎರಡನೇ ಕಂತಿನ ಅನುದಾನ ಬಿಡುಗಡೆ ಮಾಡುವ ಮೊದಲು ಕಾಮಗಾರಿಯ ಪ್ರಗತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ ಪ್ರಗತಿಯಾದಲ್ಲಿ ಮಾತ್ರ ಅನುದಾನ ಬಿಡುಗಡೆ ಮಾಡತಕ್ಕದ್ದು.
5. ರೂ.5.00ಲಕ್ಷಕ್ಕಿಂತ ಕಡಿಮೆ ಅನುದಾನ ಮಂಜೂರಾಗಿರುವ ವಕ್ಫ್ ಸಂಸ್ಥೆಗಳಿಗೆ ಅನುದಾನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡತಕ್ಕದ್ದು.

........3

6. ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಮತ್ತು ಜಿಲ್ಲಾ ವಕ್ಫ್ ಸಲಹಾ ಸಮಿತಿಯವರು ಆದೇಶ ಹೊರಡಿಸಿದ 2 ತಿಂಗಳ ಒಳಗಾಗಿ ಸದರಿ ಎಲ್ಲಾ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡುವುದು, ಸದರಿ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಹಣ ಬಿಡುಗಡೆಗೊಳಿಸಲಾಗಿದೆಯೋ ಆ ಉದ್ದೇಶಕ್ಕಾಗಿ ಬಳಕೆಯಾಗಿರುವ ಬಗ್ಗೆ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಸಂಸ್ಥೆಗಳು ಕಡ್ಡಾಯವಾಗಿ ಕಳುಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ 04 ಟಿಎಫ್‌ಪಿ 2018, ದಿನಾಂಕ:24.07.2018ರಲ್ಲಿ ಇಲಾಖಾ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

C. Hemalatha 28/9/18
**(ಸಿ.ಹೇಮಲತ)**
ಸರ್ಕಾರದ ಉಪ ಕಾರ್ಯದರ್ಶಿ
ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು
ವಕ್ಫ್ ಇಲಾಖೆ.

ಗೆ:

1) ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು
2) ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ವಿಧಾನ ಸೌಧ, ಬೆಂಗಳೂರು.
4) ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳು, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಹಜ್ ಮತ್ತು ವಕ್ಫ್ ಇಲಾಖೆ ಆಪ್ತ ಸಹಾಯಕರು, ವಿಕಾಸ ಸೌಧ, ಬೆಂಗಳೂರು.
6) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಗ್ರಾಹಕರ ವ್ಯವಹಾರಗಳು ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಹಾಗೂ ಹಜ್ ಸಚಿವರ ಆಪ್ತ ಕಾರ್ಯದರ್ಶಿಗಳು,
7) ಅಧ್ಯಕ್ಷರು/ವಕ್ಫ್ ಅಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

~~~~~*****~~~~~~
~~~~~